ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

File No: DTE-ADMI0ACM2/21/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು–560 001.
ದಿನಾಂಕ:20–10–2020.

**–:: ಸು ತ್ತೋ ಲೆ::–**

ವಿಷಯ: 2020–21ನೇ ಸಾಲಿನ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ 02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು) ಉತ್ತೀರ್ಣ ಹೊಂದಿದ ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ ನೇರವಾಗಿ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ – **ಖಾಸಗಿ ಪಾಲಿಟೆಕ್ನಿಕ್‌ಗಳಿಗೆ** ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: 1. ಈ ಕಛೇರಿಯ ಪ್ರವೇಶಾಧಿಸೂಚನೆ ದಿ:24–09–2020.
2. ಹಲವು ಖಾಸಗಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳ ಮನವಿಗಳು.

–0000000–

2020–21ನೇ ಸಾಲಿನ **02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು) ಉತ್ತೀರ್ಣ ಹೊಂದಿದ ಅಭ್ಯರ್ಥಿಗಳಿಗೆ** ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ಅಂತಿಮ ದಿನಾಂಕ:10–10–2020 ಎಂದು ಉಲ್ಲೇಖ(1)ರ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ ನಿಗಧಿಪಡಿಸಲಾಗಿತ್ತು.

ಉಲ್ಲೇಖ(2)ರ ಪತ್ರಗಳಲ್ಲಿ ಅನೇಕ ಪಾಲಿಟೆಕ್ನಿಕ್‌ಗಳಲ್ಲಿ ಇನ್ನೂ ಅನೇಕ ಸ್ಥಾನಗಳು ಖಾಲಿ ಇರುವುದಾಗಿ ಸಂಬಂಧಿಸಿದ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ವರದಿ ಮಾಡಿ ವಿಸ್ತರಿಸಬೇಕೆಂದು ಕೋರಿರುವುದನ್ನು ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರಿಗಣಿಸಿ **ಪ್ರವೇಶಾವಧಿಯನ್ನು ದಿನಾಂಕ: 29–10–2020 ರವರೆಗೆ ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಪ್ರಯುಕ್ತ, ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಕರ್ನಾಟಕದಲ್ಲಿ 02 ವರ್ಷಗಳ ಐ.ಟಿ.ಐ/ ದ್ವಿತೀಯ ಪಿ.ಯು.ಸಿ(ವಿಜ್ಞಾನ)/ ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು) ಉತ್ತೀರ್ಣತೆಯೊಂದಿಗೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಒಟ್ಟಾರೆ ಶೇ.35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ವಿಸ್ತರಿಸಲಾದ ಪ್ರವೇಶಾವಧಿಯನ್ನು **ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು** ತಿಳಿಸಲಾಗಿದೆ. ಕೋವಿಡ್–19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: **http://dtek.karnataka.gov.in** ನ್ನು ನೋಡುವುದು.

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

ನಿರ್ದೇಶಕರು

ಇವರಿಗೆ,

*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ – ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ*

ಪ್ರತಿ ಇವರಿಗೆ ಮಾಹಿತಿಗಾಗಿ:

1. ಮಾನ್ಯ ಆಯುಕ್ತರವರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಡಿವಿಪಿ(2) ವಿಭಾಗಕ್ಕೆ
7. ಇಆರ್‌ಎಸ್(3) ವಿಭಾಗಕ್ಕೆ.
8. ಕಛೇರಿ ಪ್ರತಿ.